ಶ್ರೀ ವಾಟಾಳ್ ನಾಗರಾಜ್ : ಮಾನ್ಯ ಅಧ್ಯಕ್ಷರೆ, ಇದರ ಬಗ್ಗೆ ಮಾತನಾಡುವುದಕ್ಕೆ ತಾವು ಅವಕಾಶ ಮಾಡಿಕೊಡಬೇಕು.

ಅಧ್ಯಕ್ಷರು : ಅವಕಾಶ ಕೊಡುವುದಿಲ್ಲ.

(ಮಾತನಾಡುವುದಕ್ಕೆ ಅವಕಾಶ ಕೊಡಲೇಬೇಕೆಂದು ಸನ್ಮಾನ್ಯ ಸದಸ್ಯರಾದ ಶ್ರೀ ವಾಟಾಳ್ನಾಗರಾಜ್ರವರು ಈ ಹಂತದಲ್ಲಿ ಒತ್ತಾಯಿಸುತ್ತಿದ್ದರು)

ಅಧ್ಯಕ್ಷರು : ಮೊದಲು ಪ್ರಶ್ನೋತ್ತರ ಅವಧಿ ಮುಗಿಯಲಿ, ನಂತರ ತಮಗೆ ಮಾತನಾಡುವುದಕ್ಕೆ ಅವಕಾಶ ಮಾಡಿಕೊಡುತ್ತೇನೆ.

ಶ್ರೀ ವೈ.ಕೆ. ರಾಮಯ್ಯ : ಅಧ್ಯಕ್ಷರೆ, ಇದು ನಾಚಿಕೇಗೇಡು. ನಿಮಗೆ ನಾಚಿಕೆಯಾಗುವುದಿಲ್ಲವೇ ?

(ಗೊಂದಲ)

(ಈ ಸಂದರ್ಭದಲ್ಲಿ ಮಾನ್ಯ ಸದಸ್ಯರಾದ ವೈ.ಕೆ.ರಾಮಯ್ಯನವರು ಮತ್ತು ಜಾಲಪ್ಪನವರು ಸಭಾಧ್ಯಕ್ಷರ ಪೀಠದತ್ತ ತೆರಳಿ ಮಾತನಾಡುತ್ತಿದ್ದರು)

(ಗೊಂದಲ)

ಅಧ್ಯಕ್ಷರು : ಸದಸ್ಯರುಗಳಾದ ವೈ.ಕೆ. ರಾಮಯ್ಯ ಹಾಗೂ ಆರ್.ಎಲ್. ಜಾಲಪ್ಪನವರು ಪದೇ ಪದೇ ಕಾರ್ಯಕಲಾಪಗಳಿಗೆ ಅಡ್ಡಿಯುಂಟು ಮಾಡುತ್ತಿರುವುದರಿಂದ ಇವ್ಹೊತ್ತು ಅವರನ್ನು ಸದನದಿಂದ ಅಮಾನತ್ತುಗೊಳಿಸಲಾಗಿದೆ.

(ಈ ಹಂತದಲ್ಲಿ ಸನ್ಮಾನ್ಯ ಹಿರಿಯ ಸಚವರಾದಂಥ ಪ್ರೊ: ಎಂ.ಡಿ. ನಂಜುಂಡ ಸ್ವಾಮಿಯವರು ಸಭಾಧ್ಯಕ್ಷರ ಪೀಠದತ್ತ ತೆರಳಿ ಪ್ರಶ್ನೋತ್ತರ ಪಟ್ಟಿಯನ್ನು ಹರಿದು ಬಿಸಾಕಿ ಸಭಾತ್ಯಾಗ ಮಾಡಿದರು)

ಶ್ರೀ ವಾಟಾಳ್ ನಾಗರಾಜ್ : ತಮ್ಮ ಕೋಪ ಸ್ವಲ್ಪ ಕಡಿಮೆಯಾಗಬೇಕು, ತಮಗೇನಾದರೂ ರಕ್ತದೊತ್ತಡವಿದ್ದರೆ ಅದು ಕಡಿಮೆಯಾಗಬೇಕು. ಈ ಸದನದಲ್ಲಿ ಹಿಂದೆಂದೂ ನಡೆಯದಂಥ ಕೋಲಾಹಲ ನಡೆದಿದೆ. ಆದುದರಿಂದ, ನಾನು ತಮ್ಮಲ್ಲಿ ಹೇಳುತ್ತಿದ್ದೇನೆ. ಇದು ಸರಿಯಾದಂಥ ಮಾರ್ಗ ಅಲ್ಲ, ತಮ್ಮಲ್ಲಿ ನಾನು ಕಳಕಳಿಯ ಮನವಿ ಮಾಡಿಕೊಳ್ಳುವುದೇನೆಂದರೆ.....

ಶ್ರೀ ಬಿ.ಎಸ್. ಯಡಿಯೂರಪ್ಪ : ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ನಡೆಸಬೇಕು. ರಾಜ್ಯದಲ್ಲಿ ಲಾ ಅಂಡ್ ಆರ್ಡರ್ ಸಿಚ್ಯುಯೇಷನ್ ಸರಿಯಿಲ್ಲವೆಂದರೆ ಅಂತಹ ಪರಿಸ್ಥಿತಿ ಏನು ಬಂದಿದೆ? ಎಂಬುದ್ದರ ಬಗ್ಗೆ ಸದನಕ್ಕೆ ವರದಿ ಕೊಡಬೇಕು. ಪ್ರಶ್ನೋತ್ತರ ಅವಧಿಯನ್ನು ಸಸ್ಪೆಂಡ್ ಮಾಡಿ. ನೀವು ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಕಗ್ಗೊಲೆ ಮಾಡುತ್ತಿದ್ದೀರಿ, ಇದನ್ನು ಸಹಿಸುವುದಕ್ಕಾಗುತ್ತಿಲ್ಲ, ಇವ್ಹೊತ್ತು ಲಾ ಅಂಡ್ ಆರ್ಡರ್ ಸಿಚ್ಯುಯೇಷನ್ ಕೆಟ್ಟಿದ್ದರೆ ಹೇಳಿ. ನಿಮಗೆ ವಿಕೇಂದ್ರೀಕರಣ ವ್ಯವಸ್ಥೆ ಬಗ್ಗೆ ವಿಶ್ವಾಸವಿಲ್ಲ.

(ಈ ಹಂತದಲ್ಲಿ ಸನ್ಮಾನ್ಯ ಸದಸ್ಯರಾದ ಶ್ರೀ ಬಿ.ಎಸ್ ಯಡಿಯೂರಪ್ಪನವರು ಸಭಾಧ್ಯಕ್ಷರ ಪೀಠದತ್ತ ತೆರಳಿ ನಿಂತು ಮಾತನಾಡುತ್ತಿದ್ದರು)

ಶ್ರೀ ವಾಟಾಳ್ ನಾಗರಾಜ್ : ಯಾವ ಕಾರಣದಿಂದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿ ಚುನಾವಣೆಗಳನ್ನು ಮುಂದೂಡಲಾಗಿದೆ? ಪ್ರಶ್ನೋತ್ತರ ಕಾಲವನ್ನು ಮುಂದೂಡಬೇಕು. ಇದರ ಬಗ್ಗೆ ಚರ್ಚೆಗೆ ತಾವು ಅವಕಾಶ ಮಾಡಿಕೊಡಬೇಕು.